ನೀರಾವರಿ ಇಲಾಖೆಯ ತಾಂತ್ರಿಕ ಸಿಬ್ಬಂದಿ ವಿವರ

3229 - ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಬೃಹತ್ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೀರಾವರಿ ಇಲಾಖೆಯಲ್ಲಿ ಇರುವ ಬಿ.ಇ. ಮೆಕ್ಯಾನಿಕಲ್ ಪದವೀಧರರ ಸಂಖ್ಯೆ ಎಷ್ಟು?

ಆ) ಇವರೆಲ್ಲರೂ ಇದೇ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆಯೇ?

ಇ) ಈ ಕ್ಷೇತ್ರದಲ್ಲಿ ಪ್ರಭಾರದಲ್ಲಿ ಕೆಲಸ ಮಾಡುತ್ತಿರುವವರ ಸಂಖ್ಯೆ ಎಷ್ಟು?

ಈ) ನೀರಾವರಿ ಕ್ಷೇತ್ರದಲ್ಲಿ ಮೆಕ್ಯಾನಿಕಲ್ ಇಂಜಿನಿಯರ್‌ಗಳು ಕೆಲಸ ಮಾಡದೇ ಇರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಹೆಚ್.ಕೆ. ಪಾಟೀಲ್ (ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು) :

ಅ) 306.

ಆ) ಕೇಂದ್ರ ಯಾಂತ್ರಿಕ ಸಂಸ್ಥೆಯಲ್ಲಿ 50 ಇಂಜಿನಿಯರ್‌ಗಳು ಮೆಕ್ಯಾನಿಕಲ್ ಕಾರ್ಯನಿರ್ವಹಿಸುತ್ತಿದ್ದಾರೆ. ಇನ್ನುಳಿದ 256 ಇಂಜಿನಿಯರ್‌ಗಳು ವಿವಿಧ ಕಛೇರಿಗಳಲ್ಲಿರುವ ವಾಹನಗಳು ಮತ್ತು ಯಂತ್ರೋಪಕರಣಗಳ ನಿರ್ವಹಣೆ ಮತ್ತು ಸಿವಿಲ್ ಕಾಮಗಾರಿಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.

ಇ) 2.

ಈ) ಈ ತರಹದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಹಳದಿ ಪಡಿತರ ಚೀಟಿ

3230 - ಶ್ರೀ ಗೋಪಾಲ ಭಂಡಾರಿ ಹೆಚ್. (ಕಾರ್ಕಳ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಳದಿ ಪಡಿತರ ಚೀಟಿಯನ್ನು ಕೊಡುವ ಬಗ್ಗೆ ಮಾಡಿದ ಸಮೀಕ್ಷೆಯಲ್ಲಿ ದೋಷವಿದ್ದು ಅರ್ಹ ಫಲಾನುಭವಿಗಳಿಗೆ ಅವಕಾಶ ತಪ್ಪಿ ಹೋಗಿದ್ದಲ್ಲಿ ಮರು ಪರಿಶೀಲಿಸಲು ಅಥವಾ ಪುನಃ ಸಮೀಕ್ಷೆ ಮಾಡಲು ಅವಕಾಶವಿದೆಯೇ?

ಆ) ಅರ್ಹ ಫಲಾನುಭವಿಗಳಿಗೆ ಅವಕಾಶ ತಪ್ಪಿದಲ್ಲಿ ಏನು ಮಾಡಬೇಕು?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :

ಅ) ಇದೆ.

ಆ) ಫಲಾನುಭವಿಗಳ ಪಟ್ಟಿಯಲ್ಲಿ ಅವಕಾಶ ತಪ್ಪಿ ಹೋಗಿರುವ ಅರ್ಹ ಬಡ ಕುಟುಂಬಗಳನ್ನು ಗುರುತಿಸಿ ಪಡಿತರ ಚೀಟಿಗಳನ್ನು ವಿತರಿಸಲಾಗುವುದು.

ಚಿಕ್ಕಮಗಳೂರು ಜಿಲ್ಲೆಯ ಅಯ್ಯನಕೆರೆಯ ಬಗ್ಗೆ

3232 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) *ಚಿಕ್ಕಮಗಳೂರು ಜಿಲ್ಲೆಯ ಸಖರಾಯಪಟ್ಟಣಕ್ಕೆ ಹತ್ತಿರದ ಅಯ್ಯನಕೆರೆಯಿಂದ ನೀರೊದಗಿಸಲಾಗುತ್ತಿರುವ ಒಟ್ಟು ಜಮೀನಿನ ವಿಸ್ತೀರ್ಣವೆಷ್ಟು?*

2) *ಈ ಕೆರೆಯು ಉಸ್ತುವಾರಿ ಇಲ್ಲದೆ ದುಸ್ಥಿತಿಯಲ್ಲಿದ್ದು ವಿನಾಕಾರಣ ನೀರು ಪೋಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

3) *ಈ ಕೆರೆಯನ್ನು ಅಭಿವೃದ್ಧಿಪಡಿಸಲು ಹಾಗೂ ನೀರು ಪೋಲಾಗುತ್ತಿರುವುದನ್ನು ತಡೆಗಟ್ಟಲು ತೆಗೆದುಕೊಂಡಿರುವ ಕ್ರಮಗಳೇನು?*

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :

1) 1574 ಹೆಕ್ಟೇರುಗಳು.

2) ಬಂದಿದೆ.

3) ಈ ಕೆರೆಯನ್ನು ಅಭಿವೃದ್ಧಿಪಡಿಸಲು ರೂ. 97.50 ಲಕ್ಷಗಳ ಅಂದಾಜನ್ನು ತಯಾರಿಸಲಾಗಿದ್ದು ಪರಿಶೀಲನೆಯಲ್ಲಿದೆ. ಕೆರೆಯಲ್ಲಿ ನೀರು ಕಡಿಮೆಯಾದ ನಂತರ ಸೋರುವ ಭಾಗವನ್ನು ದುರಸ್ತಿ ಮಾಡಲಾಗುವುದು.

ತೆರಿಗೆ ಸುಧಾರಣಾ ಸಲಹಾ ಸಮಿತಿಯ ವಿವರಗಳು

3233 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಹೊಸದಾಗಿ ರಚಿಸಿರುವ ತೆರಿಗೆ ಸುಧಾರಣೆ ಸಲಹಾ ಸಮಿತಿಯ ಅವಧಿ ಎಷ್ಟು? ಈ ಸಮಿತಿಯ ಸದಸ್ಯರೆಷ್ಟು?*

ಆ) *ಈ ಸಮಿತಿಯ ಸದಸ್ಯರಿಗೆ ಮತ್ತು ಅಧ್ಯಕ್ಷರಿಗೆ ಸರ್ಕಾರದ ವತಿಯಿಂದ ದೊರಕಿಸಿರುವ ಸೌಲಭ್ಯಗಳೇನು?*

ಇ) *ಸಮಿತಿಯ ಕಾರ್ಯವ್ಯಾಪ್ತಿಯ ಸ್ಥೂಲ ವಿವರ ನೀಡುವುದು?*